/26503/2022

# ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ:ಹುಬ್ಬಳ್ಳಿ

(ಆಡಳಿತ/ಸಿಬ್ಬಂದಿ ಇಲಾಖೆ)

ಸಂಖ್ಯೆ: ವಾಕರಸಾ/ಕೇಕ/ಹು/ಆಡಳಿತ/ಎ10/1819/2022 ದಿನಾಂಕ: 20/10/2022

## ಸುತ್ತೋಲೆ ಸಂಖ್ಯೆ: 98/2022

ವಿಷಯ : ರಾಜಕೀಯದಲ್ಲಿ ಮತ್ತು ಚುನಾವಣೆಗಳಲ್ಲಿ ಪಾಲ್ಗೊಳ್ಳುವುದನ್ನು ನಿಷೇದಿಸುವ ಬಗ್ಗೆ.

ಉಲ್ಲೇಖ : ಕರಾರಸಾ ಸಂಸ್ಥೆಯಿಂದ ಹೊರಡಿಸಲಾದ ಸುತ್ತೋಲೆ ಸಂ:1312 ದಿನಾಂಕ:12-04-2004

*****

ಕರಾರಸಾಸಂಸ್ಥೆ ನೌಕರರ (ನಡತೆ ಮತ್ತು ಶಿಸ್ತು) ನಿಯಮಾವಳಿ 1971 ರ ನಿಯಮಾವಳಿ-9ರಲ್ಲಿ ಸಂಸ್ಥೆಯ ನೌಕರರು ಯಾವುದೇ ರೀತಿಯ ರಾಜಕೀಯ ಅಥವಾ ಚುನಾವಣಾ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ನಿಷೇದಿಸಲಾಗಿದೆ.

ಸಂಸ್ಥೆಯ ಯಾವುದೇ ನೌಕರರು ಚುನಾವಣೆಗೆ ಸಂಬಂಧಿಸಿದಂತೆ ಪ್ರಚಾರವನ್ನಾಗಲೀ, ಪ್ರಭಾವ ಬೀರುವುದನ್ನಾಗಲೀ ಅಥವಾ ಇತರೆ ಯಾವುದೇ ರಾಜಕೀಯ / ಚುನಾವಣೆ ಚಟುವಟಿಕೆಗಳಲ್ಲಿ ಪಾಲುಗೊಳ್ಳುವುದಾಗಲಿ ಮಾಡತಕ್ಕದಲ್ಲವೆಂದು ಉಲ್ಲೇಖದಲ್ಲಿ ತಿಳಿಸಲಾದ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ಈ ಮೇಲಿನ ಆದೇಶಗಳನ್ನು ಉಲ್ಲಂಘಿಸಿದ ಬಗ್ಗೆ ವರದಿಗಳು ಬಂದಲ್ಲಿ ಸಂಬಂಧಪಟ್ಟ ನೌಕರರ ವಿರುದ್ಧ ಕರಾರಸಾಸಂಸ್ಥೆ ನೌಕರರ (ನಡತೆ ಮತ್ತು ಶಿಸ್ತು) ನಿಯಮಾವಳಿ 1971 ರ ನಿಯಮಾವಳಿ-9ರನ್ವಯ ಶಿಸ್ತಿನ ಕ್ರಮ ಜರುಗಿಸಲಾಗುವುದು.

ಸಂಬಂಧಪಟ್ಟವರೆಲ್ಲರೂ ಮೇಲಿನ ಆದೇಶಗಳನ್ನು ಅವರ ಅಧೀನದಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ನೌಕರರ ಗಮನಕ್ಕೆ ತರುವ ಜೊತೆಗೆ ಅವರ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಛೇರಿಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಲು ಕ್ರಮ ಕೈಗೊಳ್ಳುವುದು.

24/10/22

Signed by Bharath S
Date: 21-10-2022 12:59:44

ವ್ಯವಸ್ಥಾಪಕ ನಿರ್ದೇಶಕರು

ಪ್ರತಿಯನ್ನು :

- ಎಲ್ಲ ಇಲಾಖಾ ಮುಖ್ಯಸ್ಥರುಗಳಿಗೆ, ವಾಕರಸಾಸಂಸ್ಥೆ, ಕೇಂದ್ರ ಕಛೇರಿ, ಹುಬ್ಬಳ್ಳಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ
- ಎಲ್ಲ ವಿಭಾಗೀಯ ನಿಯಂತ್ರಣಾಧಿಕಾರಿಗಳು / ಕಾರ್ಯ ವ್ಯವಸ್ಥಾಪಕರು, ಪ್ರಾದೇಶಿಕ ಕಾರ್ಯಾಗಾರ, ಹುಬ್ಬಳ್ಳಿ / ಪ್ರಾಂಶುಪಾಲರು, ಪ್ರಾದೇಶಿಕ ತರಬೇತಿ ಕೇಂದ್ರ, ಹುಬ್ಬಳ್ಳಿ / ಕಾರ್ಯನಿರ್ವಾಹಕ ಅಭಿಯಂತರರು, ಬೆಳಗಾವಿ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
- ಮುಖ್ಯ ಗಣಕ ವ್ಯವಸ್ಥಾಪಕರು, ವಾಕರಸಾ ಸಂಸ್ಥೆ, ಕೇಂದ್ರ ಕಛೇರಿ, ಹುಬ್ಬಳ್ಳಿ ರವರ ಮಾಹಿತಿಗಾಗಿ ಹಾಗೂ ಸುತ್ತೋಲೆಯನ್ನು ಸಂಸ್ಥೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:

- ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ / ವ್ಯವಸ್ಥಾಪಕ ನಿರ್ದೇಶಕರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ ಕಳುಹಿಸಿದೆ.

964
22/10/22